**ಕರ್ನಾಟಕ ಸರ್ಕಾರ**

**ಕಾಲೇಜು ಮತ್ತು ತಾಂತ್ರಿಕ ಶಿಕ್ಷಣ ಇಲಾಖೆ**

File No: DTE-ADMI0ACM2/26/2020

ಆಯುಕ್ತರ ಕಛೇರಿ,
ತಾಂತ್ರಿಕ ಶಿಕ್ಷಣ ಭವನ,
ಅರಮನೆ ರಸ್ತೆ, ಬೆಂಗಳೂರು–560 001.
ದಿನಾಂಕ:29–10–2020.

**–:: ಸು ತ್ತೋ ಲೆ ::–**

ವಿಷಯ: 2020–21ನೇ ಸಾಲಿನಲ್ಲಿ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ **3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶ ಅವಧಿಯನ್ನು ವಿಸ್ತರಿಸುವ ಬಗ್ಗೆ.**

ಉಲ್ಲೇಖ:
1. ಈ ಕಛೇರಿ ಸಮಸಂಖ್ಯೆ ಸುತ್ತೋಲೆ ದಿ:08–10–2020 & 12–10–2020. (ಸರ್ಕಾರಿ ಮತ್ತು ಅನುದಾನಿತ ಪಾಲಿಟೆಕ್ನಿಕ್)
2. ಈ ಕಛೇರಿ ಸುತ್ತೋಲೆ ಪತ್ರ ಸಂ. DTE-ADMI0ACM2/27/2020, ದಿ:08–10–2020. (ಖಾಸಗಿ ಪಾಲಿಟೆಕ್ನಿಕ್)

–0000000–

2020–21ನೇ ಸಾಲಿನಲ್ಲಿ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪಾಲಿಟೆಕ್ನಿಕ್ ಪ್ರವೇಶಕ್ಕೆ ಸಂಬಂಧಿಸಿದಂತೆ, ದಂಡ ಶುಲ್ಕವಿಲ್ಲದೆ ಅಂತಿಮ ದಿನಾಂಕ:29–10–2020 ಎಂದು ಉಲ್ಲೇಖ(1)ರಲ್ಲಿ ಸುತ್ತೋಲೆಯಲ್ಲಿ ನಿಗಧಿಪಡಿಸಲಾಗಿತ್ತು. ಮುಂದುವರೆದಂತೆ, ಅನೇಕ ವಿದ್ಯಾರ್ಥಿಗಳು ಮೇಲ್ಕಂಡಂತೆ ಅಂತಿಮ ದಿನಾಂಕದೊಳಗೆ ತಮ್ಮ ವೈಯಕ್ತಿಕ ಕಾರಣಗಳಿಂದಾಗಿ ಪ್ರವೇಶ ಶುಲ್ಕ ಪಾವತಿಸದೇ ಇದ್ದು ಹಾಗೂ ಡಿಪ್ಲೋಮಾ ಪರೀಕ್ಷೆಯಲ್ಲಿ ಉತ್ತೀರ್ಣರಾದ ಅರ್ಹ ಅಭ್ಯರ್ಥಿಗಳಿಗೆ ಅವಧಿ ವಿಸ್ತರಿಸಲು ಮನವಿ ಸಲ್ಲಿಸಿರುತ್ತಾರೆ.

ಪ್ರಯುಕ್ತ, ವಿದ್ಯಾರ್ಥಿಗಳ ಮತ್ತು ಸಾರ್ವಜನಿಕರ ಹಿತದೃಷ್ಟಿಯಿಂದ ಪರಿಗಣಿಸಿ, **2020–21ನೇ ಸಾಲಿನ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್ ವಿದ್ಯಾರ್ಥಿಗಳ 3 & 5ನೇ ಸೆಮಿಸ್ಟರ್ ಡಿಪ್ಲೋಮಾ ತರಗತಿಗಳಿಗೆ ಪ್ರವೇಶಾವಧಿಯನ್ನು ಈ ಕೆಳಕಂಡಂತೆ ವಿಸ್ತರಿಸಿ ಪ್ರವೇಶ ಪಡೆಯಲು ಅನುಮತಿ ನೀಡಲಾಗಿದೆ.**

| | | |
|---|---|---|
| 1. | 03 ಮತ್ತು 05ನೇ ಸೆಮಿಸ್ಟರ್ ಡಿಪ್ಲೋಮಾ ಅಭ್ಯರ್ಥಿಗಳ ಪ್ರವೇಶದ ಹಾಗೂ 01, 03 & 05ನೇ ಸೆಮಿಸ್ಟರ್ ಡಿಪ್ಲೋಮಾ ವ್ಯಾಸಂಗಗಳಿಗೆ ಸೇರ ಬಯಸುವ ರಿಪೀಟರ್ ಅಭ್ಯರ್ಥಿಗಳ ಪ್ರವೇಶದ ಅಂತಿಮ ದಿನಾಂಕ | ದಿನಾಂಕ: **14–11–2020** ರ ಒಳಗೆ ಯಾವುದೇ ದಂಡ ಶುಲ್ಕವಿಲ್ಲದೆ ಪ್ರವೇಶ ನೀಡಬಹುದಾಗಿದೆ. |
| 3. | 3 & 5ನೇ ಸೆಮಿಸ್ಟರ್ ಪಾಲಿಟೆಕ್ನಿಕ್ ವರ್ಗಾವಣೆ ಪಡೆಯುವ ಅಭ್ಯರ್ಥಿಗಳ ಪ್ರವೇಶದ ಅಂತಿಮ ದಿನಾಂಕ | **ದಿನಾಂಕ: 14–11–2020 ರ ಒಳಗೆ** ವರ್ಗಾವಣೆ ಶುಲ್ಕ ₹ 1,000/- ನ್ನು ಪಾವತಿಸಿರುವುದನ್ನು ಪರಿಶೀಲಿಸಿ ದಿನಾಂಕ: **14–11–2020** ರ ಒಳಗೆ ಪ್ರವೇಶ ನೀಡುವುದು. |

ಮೇಲ್ಕಂಡಂತೆ ವಿಸ್ತರಿಸಲಾದ ಅವಧಿಯಲ್ಲಿ ಪ್ರವೇಶ ನೀಡುವ ಬಗ್ಗೆ ಕ್ರಮ ತೆಗೆದುಕೊಳ್ಳಬೇಕೆಂದು ಸೂಚಿಸಲಾಗಿದೆ. 03 ಮತ್ತು 05ನೇ ಸೆಮಿಸ್ಟರ್‌ಗೆ ಪ್ರವೇಶ ಬಯಸುವ ವಿದ್ಯಾರ್ಥಿಗಳು ನಿಯಮಗಳ ಪ್ರಕಾರ ಅರ್ಹತೆ ಹೊಂದಿರುವುದನ್ನು ಖಚಿತಪಡಿಸಿಕೊಂಡು ಪ್ರವೇಶ ನೀಡತಕ್ಕದ್ದು. ಮೇಲ್ಕಂಡ ಅವಧಿ ವಿಸ್ತರಣೆ ಹೊರತುಪಡಿಸಿ ಉಲ್ಲೇಖ(1) & (2)ರಲ್ಲಿನ ಸುತ್ತೋಲೆಯಲ್ಲಿ ಯಾವುದೇ ಬದಲಾವಣೆಗಳು ಇರುವುದಿಲ್ಲ.

ತಾಂತ್ರಿಕ ಪರೀಕ್ಷಾ ಮಂಡಳಿ ನಿಯಮಗಳನ್ವಯ ಹಾಜರಾತಿಯನ್ನು ಪೂರೈಸುವ ಷರತ್ತಿಗೊಳಪಟ್ಟು ಮೇಲ್ಕಂಡ ಅವಧಿಯಲ್ಲಿ ಸದರಿ ವಿದ್ಯಾರ್ಥಿಗಳಿಗೆ ಮಾತ್ರ ಅನ್ವಯವಾಗುವಂತೆ ಪ್ರವೇಶ ನೀಡತಕ್ಕದ್ದು. ನಿಯಮಗಳನ್ನು ಮೀರಿ ಮಾಡಿದ ಪ್ರವೇಶಗಳಿಗೆ ಸಂಬಂಧಿಸಿದ ಪ್ರಿನ್ಸಿಪಾಲರೇ ನೇರ ಜವಾಬ್ದಾರರಾಗುತ್ತಾರೆ.

ಆಯುಕ್ತರು

ಇವರಿಗೆ,

*ಎಲ್ಲಾ ಸರ್ಕಾರಿ, ಅನುದಾನಿತ ಮತ್ತು ಖಾಸಗಿ ಪಾಲಿಟೆಕ್ನಿಕ್‌ನ ಪ್ರಿನ್ಸಿಪಾಲರುಗಳಿಗೆ ಮಾಹಿತಿಗಾಗಿ ಮತ್ತು ಸೂಕ್ತ ಅನುಸರಣೆಗಾಗಿ.*

**ಪ್ರತಿ ಇವರಿಗೆ ಮಾಹಿತಿಗಾಗಿ:**

1. ಆಯುಕ್ತರವರ ಆಪ್ತಶಾಖೆಗೆ.
2. ನಿರ್ದೇಶಕರವರ ಆಪ್ತಶಾಖೆಗೆ.
3. ಜಂಟಿ ನಿರ್ದೇಶಕರವರ ಆಪ್ತಶಾಖೆಗೆ.
4. ಕಾರ್ಯದರ್ಶಿಯವರ ಆಪ್ತಶಾಖೆಗೆ.
5. ಸಾರ್ವಜನಿಕ ಸಂಪರ್ಕಾಧಿಕಾರಿಯವರಿಗೆ.
6. ಇ–ಗವರ್ನೆನ್ಸ್ ವಿಭಾಗಕ್ಕೆ – ವೆಬ್‌ಸೈಟ್‌ನಲ್ಲಿ ಪ್ರಚುರಪಡಿಸುವುದು.
7. ಆರ್.ಡಿ.ಎಂ ವಿಭಾಗಗಳಿಗೆ.
8. ಇಆರ್‌ಎಸ್(3) ವಿಭಾಗಕ್ಕೆ.
9. ಕಛೇರಿ ಪ್ರತಿ.